ಆ) ಸರ್ಕಾರದ ಸುತ್ತೋಲೆ ಸಂಖ್ಯೆ: ಆರ್‌ಡಿ 57 ಎಲ್‌ಜಿಪಿ 2008, ದಿ:20.08.2009ರಲ್ಲಿ ಯಾವುದೇ ಪ್ರಕರಣದಲ್ಲಿ ಗೋಮಾಳ ಜಮೀನಿನ ವಿಸ್ತೀರ್ಣ ಕರ್ನಾಟಕ ಭೂ ಕಂದಾಯ ನಿಯಮಾವಳಿಗಳ ನಿಯಮ 97(1)ಕ್ಕಿಂತ ಕಡಿಮೆ ಇದ್ದಲ್ಲಿ ಅವುಗಳ ಒತ್ತುವರಿಯಾಗಿದ್ದರೂ ಸಹ ಸಕ್ರಮಗೊಳಿಸಲು ಯಾವುದೇ ಕ್ರಮವನ್ನಾಗಲಿ ಅಥವಾ ಬುಗರ್ ಹುಕುಂ ಸಾಗುವಳಿ ಸಕ್ರಮೀಕರಣ ಸಮಿತಿಯ ಮುಂದೆ ಇಡುವ ಕ್ರಮವನ್ನಾಗಲಿ ತೆಗೆದುಕೊಳ್ಳಬಾರದೆಂದು ಹಾಗೂ ಇಂತಹ ಪ್ರಕರಣಗಳಲ್ಲಿ ಸಮಿತಿಯು ಶಿಫಾರಸ್ಸು ಮಾಡಿದ್ದರೂ ಸಹ ಸಾಗುವಳಿ ಚೀಟಿ ನೀಡಲು ಅವಕಾಶವಿರುವುದಿಲ್ಲವೆಂದ ನಿರ್ದೇಶನಗಳನ್ನು ನೀಡಲಾಗಿದೆ.

ಇ) ಬಂದಿದೆ.

ಈ) ಸರ್ಕಾರದ ಸುತ್ತೋಲೆ ಸಂಖ್ಯೆ: ಆರ್‌ಡಿ 57 ಎಲ್‌ಜಿಪಿ 2008, ದಿ:20.08.2009ರಲ್ಲಿನ ನಿರ್ದೇಶನಕ್ಕೊಳಪಟ್ಟು ಬೇರೆ ತೊಂದರೆಗಳೇನೂ ಇರುವುದಿಲ್ಲ.

ಉ) ಸರ್ಕಾರದ ಸುತ್ತೋಲೆ ಸಂಖ್ಯೆ: ಆರ್‌ಡಿ 57 ಎಲ್‌ಜಿಪಿ 2008, ದಿ:20.08.2009ರಲ್ಲಿನ ನಿರ್ದೇಶನಕೊಳಪಟ್ಟಿರುವ ಅರ್ಹ ಪ್ರಕರಣಗಳಲ್ಲಿ ಮಾತ್ರ ಹಣ ತುಂಬಿಸಿಕೊಂಡು ಹಕ್ಕುಪತ್ರ ನೀಡಲು ಕ್ರಮ ಕೈಗೊಳ್ಳಲಾಗುವುದು.

ಊ) ಜರೂರಾಗಿ ಹಕ್ಕುಪತ್ರಗಳನ್ನು ವಿತರಿಸಲು ಕ್ರಮ ಕೈಗೊಳ್ಳಲಾಗುವುದು.

ಸಮಗ್ರ ನೀರಾವರಿ ಯೋಜನೆ

731(1011) ಶ್ರೀ ರಾಮಚಂದ್ರ ಎಸ್ ವಿ:(ಜಗಳೂರು) ಮಾನ್ಯ ಜಲಸಂಪನ್ಮೂಲ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಭದ್ರಾ ಮೇಲ್ದಂಡೆ ಯೋಜನಾ ವ್ಯಾಪ್ತಿಗೆ ಬರುವ ಬರಪೀಡಿತ ಪ್ರದೇಶವಾದ ಜಗಳೂರು ತಾಲ್ಲೂಕು ಪ್ರದೇಶವನ್ನು ಸಮಗ್ರ ನೀರಾವರಿ ಯೋಜನಾ ವ್ಯಾಪ್ತಿಗೆ ಸೇರಿಸುವ ಬಗ್ಗೆ ಸರ್ಕಾರವು ಕೈಗೊಂಡಿರುವ ಕ್ರಮಗಳೇನು;

ಆ) ಹಾಗಿದ್ದಲ್ಲಿ, ಯಾವ ಹಂತದಲ್ಲಿದೆ; (ವಿವರ ಒದಗಿಸುವುದು)?

ಶ್ರೀ ಬಸವರಾಜ ಬೊಮ್ಮಾಯಿ(ಜಲಸಂಪನ್ಮೂಲ ಸಚಿವರು)

ಅ) ಆಂಧ್ರಪ್ರದೇಶ ರಾಜ್ಯದ ಪೊಲ್ಲಾವರಂ ಯೋಜನೆಗೆ ಕೇಂದ್ರ ಸರ್ಕಾರ ಮಂಜೂರಾತಿ ನೀಡಿರುವುದರಿಂದ, ಕರ್ನಾಟಕವು 23 ಟಿಎಂಸಿ ನೀರನ್ನು ಕೃಷ್ಣಾ

ಕಣಿವೆಯಲ್ಲಿ ಉಪಯೋಗಿಸಿಕೊಳ್ಳಬಹುದಾಗಿದ್ದು, ಈ 23 ಟಿಎಂಸಿ ನೀರನ್ನು ಹಂಚಿಕೆ ಮಾಡುವ ಸಲುವಾಗಿ ದಿನಾಂಕ: 20-01-2010 ರಂದು ಶ್ರೀ ಡಿ.ಎನ್.ದೇಸಾಯಿ, ಪ್ರಧಾನ ಸಲಹೆಗಾರರು, ಜಲಸಂಪನ್ಮೂಲ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ರಚಿಸಲಾಗಿರುತ್ತದೆ. ಸಮಿತಿಯು ಹಲವಾರು ಸಭೆಗಳನ್ನು ನಡೆಸಿದ್ದು, ವಿವಿಧ ಯೋಜನೆಗಳನ್ನು ನೀರಿನ ಹಂಚಿಕೆ ಮಾಡಬೇಕಾಗಿದೆ. ಭದ್ರಾ ಮೇಲ್ದಂಡೆ ಯೋಜನಾ ವ್ಯಾಪ್ತಿಗೆ ಬರುವ ಜಗಳೂರು ತಾಲ್ಲೂಕು ಪ್ರದೇಶವನ್ನು ಸಹ ನೀರಾವರಿಗೆ ಒಳಪಡಿಸುವ ಬಗ್ಗೆ ಈ ಹಂಚಿಕೆಯಲ್ಲಿ ಪರಿಗಣಿಸಬೇಕೆಂದು ಸೂಚಿಸಲಾಗಿದೆ.

ಆ) ಮೇಲೆ ತಿಳಿಸಿರುವ ಸಮಿತಿಯ ವರದಿ ಸ್ವೀಕೃತವಾಗಿದ್ದು, ಅದನ್ನು ಪರಿಶೀಲಿಸಿ ಮುಂದಿನ ಕ್ರಮ ಕೈಗೊಳ್ಳಲಾಗುವುದು.

ವ್ಯಾಯಾಮ ಶಾಲೆ

732(1012) ಶ್ರೀ ರಾಮಚಂದ್ರ ಎಸ್ ವಿ:(ಜಗಳೂರು) ಮಾನ್ಯ ಜವಳಿ, ಯುವಜನ ಸೇವಾ ಮತ್ತು ಕ್ರೀಡಾ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಜಗಳೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಕ್ರೀಡಾಪಟುಗಳ ಅನುಕೂಲತೆಯ ಸಲುವಾಗಿ ಪ್ರತಿ ಹೋಬಳಿ ಮಟ್ಟದಲ್ಲಿ ವ್ಯಾಯಾಮ ಶಾಲೆಯನ್ನು ತೆರೆಯಲು ಸರ್ಕಾರವು ಚಿಂತನೆ ನಡೆಸಿದೆಯೇ;

ಆ) ನಡೆಸಿದ್ದಲ್ಲಿ, ಯಾವ ಯಾವ ಹೋಬಳಿಗಳಲ್ಲಿ ವ್ಯಾಯಾಮ ಶಾಲೆಯನ್ನು ತೆರೆಯಲಾಗುವುದು; (ತಾಲ್ಲೂಕುವಾರು ವಿವರ ಒದಗಿಸುವುದು);

ಇ) ಇದಕ್ಕೆ ನಿಗಧಿಪಡಿಸಿರುವ ಅನುದಾನ ಎಷ್ಟು; (ವಿವರ ಒದಗಿಸುವುದು)?

ಶ್ರೀ ಗೂಳಿಹಟ್ಟಿ ಡಿ ಶೇಖರ್(ಜವಳಿ, ಯುವಜನ ಸೇವಾ ಮತ್ತು ಕ್ರೀಡಾ ಸಚಿವರು)

ಅ) ಇಲ್ಲ

ಆ) ಮೇಲಿನ (ಅ) ಪ್ರಶ್ನೆಗೆ ನೀಡಿದ ಉತ್ತರದಿಂದ ಇದು ಉದ್ಭವಿಸುವುದಿಲ್ಲ.

ಇ) ಮೇಲಿನ ಪ್ರಶ್ನೆಗಳಿಗೆ ನೀಡಿದ ಉತ್ತರದಿಂದ ಇದು ಉದ್ಭವಿಸುವುದಿಲ್ಲ.